| ಕರ್ನಾಟಕ ವಿಧಾನ ಪರಿಷತ್ತು | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 108 (1122) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 12.03.2026 |
| ಉತ್ತರಿಸುವವರು | : | ಮುಖ್ಯಮಂತ್ರಿಯವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ 2.84 ಲಕ್ಷಕ್ಕೂ ಅಧಿಕ ಹುದ್ದೆಗಳು ಖಾಲಿ ಇರುವುದು ನಿಜವೇ;<br><br>ಇದ್ದಲ್ಲಿ, ಇಷ್ಟು ದೊಡ್ಡ ಪ್ರಮಾಣದ ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕ ಸೇವೆಗಳನ್ನು ನೀಡುವಲ್ಲಿ ಸರ್ಕಾರ ಎದುರಿಸುತ್ತಿರುವ ಆರ್ಥಿಕ ಹಾಗೂ ಆಡಳಿತಾತ್ಮಕ ಸಮಸ್ಯೆಗಳು ಯಾವುವು; | ಪ್ರಸ್ತುತ ರಾಜ್ಯ ಸರ್ಕಾರದಲ್ಲಿ ವಿವಿಧ ಇಲಾಖೆಗಳಲ್ಲಿ 7,76,414 ಹುದ್ದೆಗಳು ಮಂಜೂರಾಗಿದ್ದು, 4,91,533 ಹುದ್ದೆಗಳನ್ನು ತುಂಬಲಾಗಿದೆ. ಅಲ್ಲದೇ, ಗ್ರೂಪ್-ಸಿ ಹಾಗೂ ಗ್ರೂಪ್-ಡಿ ವೃಂದದ ಹುದ್ದೆಗಳಾದ ದತ್ತಾಂಶ ನಮೂದು ಸಹಾಯಕರು ಹಾಗೂ ವಾಹನ ಚಾಲಕರ 96,844 ಹುದ್ದೆಗಳನ್ನು ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಈಗಾಗಲೇ ಭರ್ತಿ ಮಾಡಲಾಗಿದೆ. ಎಲ್ಲಾ ಸೇರಿ ಒಟ್ಟು 5,88,377 ಹುದ್ದೆಗಳನ್ನು ತುಂಬಲಾಗಿದೆ. ಕೇವಲ 1,88,037 ಹುದ್ದೆಗಳು ಖಾಲಿ ಇರುತ್ತವೆ.<br>ಕಳೆದ 3 ವರ್ಷಗಳಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳ ಮೂಲಕ ಇಲಾಖೆಗಳಲ್ಲಿ ಖಾಲಿ ಇರುವ 8157 ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆ. ಮುಂದುವರೆದು 3081 ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. ಅಲ್ಲದೇ, 56,432 ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯನ್ನು 30 ದಿವಸಗಳಲ್ಲಿ ಪ್ರಾರಂಭಿಸುವಂತೆ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 1 ಸೇಹಿಮ 2026, ದಿನಾಂಕ:27-2-2026 ರಲ್ಲಿ ಎಲ್ಲಾ ಇಲಾಖೆಗಳಿಗೆ / ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆ ನೀಡಲಾಗಿದೆ. |
| ಆ) | ಖಾಲಿ ಇರುವ ಹುದ್ದೆಗಳಿಂದಾಗಿ ಸಾರ್ವಜನಿಕ ಸೇವೆಗಳು ನೀಡುವಲ್ಲಿ ಸಾಮಾಜಿಕ, ಆರ್ಥಿಕ ಹಾಗೂ ಆಡಳಿತಾತ್ಮಕ ಸಮಸ್ಯೆಗಳನ್ನು ಎದುರಾಗದಂತೆ ಸರ್ಕಾರ ಕೈಗೊಂಡ ಕ್ರಮಗಳೇನು; | |
| ಇ) | ಮಾನ್ಯ ಹೈಕೋರ್ಟ್‌ನ ಮೌಖಿಕ ಆದೇಶದಂತೆ ಹಾಲಿ ಚಾಲ್ತಿಯಲ್ಲಿರುವ 56% ಮೀಸಲಾತಿ ಪ್ರಕರಣವು ಇತ್ಯರ್ಥವಾಗುವವರೆಗೆ ಹಳೆಯ 50% ಮೀಸಲಾತಿ ಮತ್ತು ರೋಸ್ಟರ್ ನ ಅಡಿಯಲ್ಲೇ ನೇಮಕಾತಿಯನ್ನು ಮಾಡಿಕೊಳ್ಳಬಹುದಲ್ಲವೇ; ಈ ಕುರಿತು ಸರ್ಕಾರದ ನಿಲುವೇನು; | ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) 2022ರ ಅಧಿನಿಯಮವನ್ನು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಶ್ನಿಸಿ ರಿಟ್ ಅರ್ಜಿ ಸಂಖ್ಯೆಗಳಾದ 200448/2025, 17968/2025 ಮತ್ತು 3145/2023 ದಾಖಲಾಗಿರುತ್ತವೆ. ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು **ದಿನಾಂಕ 27-11-2025ರಂದು** ಮಧ್ಯಂತರ ಆದೇಶ ನೀಡಿದ್ದು, ಸದರಿ ಆದೇಶದ ಉದ್ಧೃತ ಭಾಗ ಈ ಕೆಳಕಂಡಂತಿದೆ:<br>**"....to direct that no further notification for recruitment or appointment on the basis of increased reservations would be issued till the disposal of the present petitions.**<br>**The recruitment pursuant to the process that is already begun, may be continued. However, any appointment made shall be subject to the final outcome of the present petitions."** |

| | | |
|---|---|---|
| | | ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶದಿಂದಾಗಿ ಹಲವಾರು ಇಲಾಖೆಗಳಲ್ಲಿನ ಖಾಲಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಸ್ಥಗಿತಗೊಂಡಿರುತ್ತದೆ.<br>ಆದರೆ, ನಿರುದ್ಯೋಗಿ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಹಾಗೂ ಆಡಳಿತಾತ್ಮಕ ವ್ಯವಸ್ಥೆಯ ಮೇಲೆ ದುಷ್ಪರಿಣಾಮ ಬೀರುತ್ತಿರುವುದನ್ನು ಮನಗಂಡು ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 1 ಸೇಹಿಮ 2026, ದಿನಾಂಕ:27-2-2026 ಅನ್ನು ಹೊರಡಿಸಲಾಗಿದೆ.<br>ಸದರಿ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 8 ಸೇಹಿಮ 1995, ದಿನಾಂಕ 20-6-1995 ರನ್ವಯ ಮೀಸಲಾತಿ ಪ್ರಮಾಣ (ಶೇ.50) ಹಾಗೂ ರೋಸ್ಟರ್ ಬಿಂದುಗಳಂತೆ ಖಾಲಿಯಿರುವ ನೇರ ನೇಮಕಾತಿ ಹುದ್ದೆಗಳಲ್ಲಿ 56,432 ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯನ್ನು ಮುಂದಿನ 30 ದಿನಗಳಲ್ಲಿ ಪ್ರಾರಂಭಿಸುವಂತೆ ಎಲ್ಲಾ ಇಲಾಖೆಗಳಿಗೆ / ನೇಮಕಾತಿ ಪ್ರಾಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿದೆ.<br>ಇದೇ ಆದೇಶದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟು ಆಯಾ ಇಲಾಖೆಗಳು / ನೇಮಕಾತಿ ಪ್ರಾಧಿಕಾರಿಗಳು ಮುಂದಿನ ನೇಮಕಾತಿ ಮಾಡುವ ಹುದ್ದೆಗಳಲ್ಲಿ ಶೇ. 6 ರಷ್ಟು (ಪರಿಶಿಷ್ಟ ಜಾತಿಗೆ ಶೇ. 2 ಮತ್ತು ಪರಿಶಿಷ್ಟ ಪಂಗಡಕ್ಕೆ ಶೇ. 4) ಹುದ್ದೆಗಳನ್ನು ಕಾಯ್ದಿರಿಸತಕ್ಕದ್ದೆಂದು ತಿಳಿಸಲಾಗಿದೆ. |
| ಈ | ನೇಮಕಾತಿಯಲ್ಲಿ ವಿಳಂಬವಾಗಿದೆ ಎಂದು 5 ವರ್ಷ ವಯೋಮಿತಿ ಸಡಿಲಿಕೆ ಮಾಡಿದ್ದು, ಯಾವುದೇ ನೇಮಕಾತಿಯನ್ನು ಮಾಡದೇ ಇದ್ದರೇ ವಯೋಮಿತಿ ಸಡಿಲಿಕೆ ಮಾಡಿರುವ ಪ್ರಯೋಜನವೇನು; ಮುಂಬರುವ ನೇಮಕಾತಿ ಅಧಿಸೂಚನೆ ಆಗುವವರೆಗೂ ಮತ್ತೊಮ್ಮೆ ವಯೋಮಿತಿ ಸಡಿಲಿಕೆಯನ್ನು ವಿಸ್ತರಣೆ ಮಾಡಲಾಗುತ್ತದೆಯೇ? (ಸ್ಪಷ್ಟನೆ ನೀಡುವುದು) | ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 262 ಸೇನೆನಿ 2025, ದಿನಾಂಕ:29.01.2026ರಲ್ಲಿ, ಈ ಆದೇಶ ಹೊರಡಿಸಲಾದ ನಂತರ ಮುಂದಿನ ದಿನಾಂಕ: 31.12.2027ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ 5 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ. ಇದರಿಂದ ಎಲ್ಲಾ ಆಕಾಂಕ್ಷಿಗಳಿಗೆ ಸರ್ಕಾರಿ ನೌಕರಿಗೆ ಸೇರಲು ಪ್ರಯೋಜನವಾಗುತ್ತದೆ. |

**ಕಡತ ಸಂಖ್ಯೆ: ಸಿಆಸುಇ 75 ರಾಸ 2026**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ